



ಅರುಣ ಪಿ. ಭಟ್ಟ

# ವಾರಭವಿಷ್ಯ 4.2.2021ರಿಂದ 10.2.2021ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ವೃತ್ತಿಗೆ ಸಂಬಂಧಿಸಿದಂತೆ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇತರ ಸ್ಥಳದಲ್ಲಿ ನಡೆಯುತ್ತಿರುವ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಶುಭದಿನ 10. ಗಣಪತಿಗೆ 108 ದೂರ್ವಾರ್ಚನೆ ಮಾಡಿಸಿರಿ.




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಪ್ರಮುಖವಾದ ತೀರ್ಮಾನವೊಂದನ್ನು ಕೈಗೊಳ್ಳಲಿದ್ದೀರಿ. ಶುಭದಿನ 8. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯಾಪಾರ ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ನಿಮಗೆ ಯಶಸ್ಸು ದೊರೆಯುವ ಸಾಧ್ಯತೆ ಇದೆ. ಇನ್ನು ವಾರದ ದ್ವಿತೀಯಾರ್ಧದಲ್ಲಿ ವೈವಾಹಿಕ ಜೀವನವು ಸಂತೋಷವಾಗಿರುತ್ತದೆ. ನಿಮ್ಮ ಕೆಲಸವನ್ನು ಹೆಚ್ಚು ವೇಗದಿಂದ ಮಾಡಲಿದ್ದೀರಿ. ಶುಭದಿನ 7. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ನಿಮ್ಮ ಮಕ್ಕಳ ಪ್ರಗತಿಯಿಂದ ಮನಸಿಗೆ ಸಂತಸವಾಗುತ್ತದೆ. ತಮ್ಮ ಪಾಲಿನ ಜವಾಬ್ದಾರಿಯನ್ನು ತುಂಬ ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ಆದಾಯ ಹೆಚ್ಚಿಸಿಕೊಳ್ಳಲು ಸಫಲರಾಗಲಿದ್ದು, ಅದರಿಂದ ಅನುಕೂಲ ದೊರೆಯಲು ಆರಂಭವಾಗುತ್ತದೆ. ಪ್ರೀತಿ– ಪ್ರೇಮ ಸಂಬಂಧದಲ್ಲಿ ತೊಡಗಿರುವವರು ಸುಮಧುರವಾದ ಅನುಭವವನ್ನು ಪಡೆಯಲಿದ್ದೀರಿ. ಶುಭದಿನ 9. ಹನುಮಾನ್ ಚಾಲಿಸ್ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ– ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಬರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ವೇಗವಾಗಿ ಕೆಲಸಗಳನ್ನು ಪೂರೈಸಲು ಸಾಧ್ಯವಾಗುತ್ತದೆ. ಶುಭದಿನ 5. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ ಇದೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಆದರೆ ಇದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಶುಭದಿನ 8. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ 9. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಆದರೆ ಪರಿಣಾಮಕಾರಿಯಾದ ಕಾರ್ಯ ಅನುಷ್ಠಾನಕ್ಕೆ ಹೆಚ್ಚು ಸಿಬ್ಬಂದಿಯ ಅಗತ್ಯ ಬರುತ್ತದೆ. ಶುಭದಿನ 10. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಈ ಹಿಂದೆಂದಿಗಿಂತ ಯೋಜನೆಗಳನ್ನು ವೇಗವಾಗಿ ಅನುಷ್ಠಾನಕ್ಕೆ ತರಲು ಉತ್ಸಾಹದಿಂದ ಕಾರ್ಯ ನಿರ್ವಹಿಸುತ್ತೀರಿ. ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಇರುವ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿ ಮಾಡುವ ಸಾಧ್ಯತೆ ಇದೆ. ವಾರದ ಅಂತ್ಯದಲ್ಲಿ ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ಶುಭದಿನ 6. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ಹೆಚ್ಚಿಸುತ್ತೀರಿ. ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ಶುಭದಿನ 7. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣ ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ 6. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂತಹ ಹಲವು ಕೆಲಸ– ಕಾರ್ಯಗಳನ್ನು ಪೂರ್ಣಗೊಳಿಸಲು ಸಂಪೂರ್ಣಮಾಡಲು ಆಗುತ್ತದೆ. ವಾರದ ಮೊದಲ ಭಾಗವು ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ಇದರಿಂದ ನಿಮಗೆ ಚಿಂತೆ ಉಂಟಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಆರೋಗ್ಯದಲ್ಲಿ ಚೇತರಿಕೆ ಕಾಣುತ್ತದೆ. ಶುಭದಿನ 10. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.